# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2016–17ನೇ ಸಾಲಿನ "ದೇವರಾಜ್ ಅರಸು ವಸತಿ ಯೋಜನೆ"ಯಡಿ 20,000 ಮನೆಗಳ ಗುರಿಯನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ವಇ 39 ಹೆಚ್ಎಹೆಚ್ 2013, ದಿನಾಂಕ:20.05.2013.
2. ಸರ್ಕಾರದ ಆದೇಶ ಸಂಖ್ಯೆ:ವಇ 33 ಹೆಚ್ಎಹೆಚ್ 2013, ದಿನಾಂಕ:29.09.2014.
3. ಸರ್ಕಾರದ ಆದೇಶ ಸಂಖ್ಯೆ:ವಇ 114 ಹೆಚ್ಎಹೆಚ್ 2015, ದಿನಾಂಕ:19.11.2015.
4. 2016–17ನೇ ಸಾಲಿನ ಮಾನ್ಯ ಮುಖ್ಯ ಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ–224.

**ಪ್ರಸ್ತಾವನೆ:**

ಮೇಲೆ ಓದಲಾಗಿರುವ(1)ರಲ್ಲಿ ಸರ್ಕಾರದ ಆದೇಶದಲ್ಲಿ ವಿಶೇಷ ವರ್ಗದ ಫಲಾನುಭವಿಗಳನ್ನು ಗುರ್ತಿಸಲು ಮತ್ತು ಯೋಜನೆಯನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿಯನ್ನು ನೀಡಲಾಗಿದೆ. ಮೇಲೆ ಓದಲಾದ (2)ರಲ್ಲಿ 2016–17ನೇ ಸಾಲಿನ ಆಯವ್ಯಯದ ಕಂಡಿಕೆ–224ಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಿರುತ್ತಾರೆ.

ಬೆಂಗಳೂರು. 03 MAY 2018

ಮೇಲೆ ಓದಲಾದ ಕ್ರ.ಸಂ.(4)ರ ಆಯವ್ಯಯದ ಭಾಷಣದ ಕಂಡಿಕೆ–224ಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿರುತ್ತದೆ. "ವಸತಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಗೆ ಹೆಚ್ಚಿನ ಸಮಯ ತಗುಲುತ್ತದೆ. ಆದ್ದರಿಂದ ವಸತಿ ಯೋಜನೆಗಳ ತ್ವರಿತ ಅನುಷ್ಠಾನಕ್ಕಾಗಿ 2016–17 ಮತ್ತು 2017–18ನೇ ಸಾಲಿನ ಗುರಿಗಳಿಗೆ ಅನುಗುಣವಾಗಿ ಆರು ಲಕ್ಷ ಫಲಾನುಭವಿಗಳನ್ನು (ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ ಅಡಿಯಲ್ಲಿ 2.5ಲಕ್ಷ, ಬಸವ ಗ್ರಾಮೀಣ ವಸತಿ ಯೋಜನೆ ಅಡಿ 2,10,000, ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 80,000, ವಾಜಪೇಯಿ ನಗರ ವಸತಿ ಯೋಜನೆಯಡಿ 40,000 ಮತ್ತು "ದೇವರಾಜ್ ಅರಸು ವಸತಿ ಯೋಜನೆ' ಅಡಿ 20,000 ಮನೆಗಳು) ಏಕಕಾಲಕ್ಕೆ ಆಯ್ಕೆ ಮಾಡಲು ತೀರ್ಮಾನಿಸಲಾಗಿದೆ. 2016–17ನೇ ವರ್ಷದಲ್ಲಿ 3 ಲಕ್ಷ ಮನೆಗಳ ನಿರ್ಮಾಣ ಪೂರ್ಣಗೊಳಿಸಲಾಗುವುದು." ಎಂದು ಘೋಷಿಸಲಾಗಿದೆ.

C.82073

ಅದರಂತೆ ಮೇಲಿನ 2016–17ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿ 6ಲಕ್ಷ ಮನೆಗಳನ್ನು ಮಂಜೂರು ಗುರಿ ಹೊಂದಲಾಗಿದ್ದು, ಈ 6ಲಕ್ಷ ಮನೆಗಳ ಗುರಿಯಲ್ಲಿ "ದೇವರಾಜ್ ಅರಸು ವಸತಿ ಯೋಜನೆ"ಯಡಿ 20000 ಮನೆಗಳ ಗುರಿಯನ್ನು ನಿಗದಿಪಡಿಸಲು ತೀರ್ಮಾನಿಸಲಾಗಿದೆ. ಈ ಯೋಜನೆಯಡಿ 14 ವಿಶೇಷ ವರ್ಗದವರಿಗಾಗಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಅದರಂತೆ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಪರಿಶೀಲಿಸಲಾಗಿದ್ದು, ಈ ಕೆಳಗಿನಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ವಇ 36 ಹೆಚ್ಎಹೆಚ್ 2016, ಬೆಂಗಳೂರು, ದಿನಾಂಕ:29.4.2016.

ವಸತಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಗೆ ಹೆಚ್ಚಿನ ಸಮಯ ತಗುಲುತ್ತದೆ. ಆದ್ದರಿಂದ ವಸತಿ ಯೋಜನೆಗಳ ತ್ವರಿತ ಅನುಷ್ಠಾನಕ್ಕಾಗಿ 2016–17 ಮತ್ತು 2017–18ನೇ ಸಾಲಿನ ಗುರಿಗಳಿಗೆ ಅನುಗುಣವಾಗಿ ಆರು ಲಕ್ಷ ಫಲಾನುಭವಿಗಳನ್ನು (ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ ಅಡಿಯಲ್ಲಿ 2.5ಲಕ್ಷ, ಬಸವ ಗ್ರಾಮೀಣ ವಸತಿ ಯೋಜನೆ ಅಡಿ 2,10,000, ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 80,000, ವಾಜಪೇಯಿ ನಗರ ವಸತಿ ಯೋಜನೆಯಡಿ 40,000 ಮತ್ತು "ದೇವರಾಜ್ ಅರಸು ವಸತಿ ಯೋಜನೆ' ಅಡಿ 20,000 ಮನೆಗಳು) ಏಕಕಾಲಕ್ಕೆ ಆಯ್ಕೆ ಮಾಡಿ 2016–17ನೇ ವರ್ಷದಲ್ಲಿ 3 ಲಕ್ಷ ಮನೆಗಳ ನಿರ್ಮಾಣ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ." ಅದರಂತೆ, "ದೇವರಾಜ್ ಅರಸು ವಸತಿ ಯೋಜನೆ"ಯಡಿ 20,000 ಮನೆಗಳ ನಿರ್ಮಾಣದ ಗುರಿಯನ್ನು ಮಂಜೂರು ಮಾಡಲಾಗಿದೆ. ಈ ಯೋಜನೆಯನ್ನು ಈಗಾಗಲೇ ಹೊರಡಿಸಲಾಗಿರುವ ದಿನಾಂಕ:29.09.2014ರಂತೆ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲು ತಿಳಿಸಿದೆ.

..2

"ದೇವರಾಜ್ ಅರಸು ವಸತಿ ಯೋಜನೆ"ಯಡಿ 20,000 ಮನೆಗಳ ನಿರ್ಮಾಣಕ್ಕೆ ತಗಲುವ ವೆಚ್ಚವನ್ನು 2016-17ನೇ ಸಾಲಿನ ಆಯವ್ಯಯದಲ್ಲಿ ವಸತಿ ಇಲಾಖೆಯ ವಿವಿಧ ವಸತಿ ಯೋಜನೆಗಳ ಅನುಷ್ಠಾನಕ್ಕೆ ನೀಡಲಾಗಿರುವ ಈ ಯೋಜನೆಯ ಲೆಕ್ಕ ಶೀರ್ಷಿಕೆಯಲ್ಲಿ ಒದಗಿಸಲಾಗುವ ಅನುದಾನದಿಂದ ಭರಿಸತಕ್ಕದ್ದು.

ಆದೇಶವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ಸೂಕ್ತ ಸುತ್ತೋಲೆಯನ್ನು ಹೊರಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಸಮೀರ್ ಮಡಿಮನ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ವಸತಿ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) (ಆಡಿಟ್ 1 ಮತ್ತು 2) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಇಲಾಖೆ.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ.
4. ಎಲ್ಲಾ ಜಿಲ್ಲಾಧಿಕಾರಿಗಳು, ಎಲ್ಲಾ ವಿಭಾಗಾಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್‌ರವರು, ಎಲ್ಲಾ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯ್ತಿ ಹಾಗೂ ಆಯುಕ್ತರು, ನಗರಸಭೆ ರವರಿಗೆ ಮತ್ತು ಇತರೆ ಸಂಬಂಧಪಟ್ಟ ಅಧಿಕಾರಿಗಳಿಗೆ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತರವರ ಮುಖಾಂತರ.
5. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9), ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ-ಗ್ರೇಡ್-1, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
9. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ.